## ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.4/2021

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ಲೋಹಿತ್ | CW: 4 | PW: 3 |
| ತಂದೆಯ ಹೆಸರು | : | ಶೇಖರಪ್ಪ | | |
| ವಯಸ್ಸು | : | 40 | | |
| ವೃತ್ತಿ | : | ಕೂಲಿ | | |
| ವಾಸಸ್ಥಳ | : | ಸಿದ್ದಾಪುರ | | |

ದಿನಾಂಕಃ 23.01.2026 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯವಿಚಾರಣೆಃ – ಮಾನ್ಯ ಸ.ಸ.ಅ.ರವರಿಂದಃ–

ಆರೋಪಿಗಳು ಗೊತ್ತಿಲ್ಲ. ಚಾಸಾ 1 ರಿಂದ 3, 5 ರಿಂದ 9 ರವರು ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿಲ್ಲ. ನಾನು ಯಾವುದೇ ಗಲಾಟೆ ನೋಡಿಲ್ಲ. ಈ ಪ್ರಕರಣದ ಸಂಬಂಧ ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.)

ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ–

ದಿಃ 05.06.2020 ರಾತ್ರಿ 9.30 ರ ಸಮಯದಲ್ಲಿ ನಾನು ನಮ್ಮ ಗ್ರಾಮದ ಸರ್ಕಲ್ ಬಳಿ ಇದ್ದಾಗ ಚಾಸಾ 8 ರವರ ಮನೆಯ ಹತ್ತಿರ ಗಲಾಟೆ ಶಬ್ದ ಕೇಳಿ ಅಲ್ಲಿಗೆ ಹೋಗಿ ನೋಡಿದಾಗ ನಮ್ಮ

ಆರೋಪಿಗಳೆಲ್ಲರೂ ಚಾಸಾ 1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದರು ಎಂದರೆ ಸರಿಯಲ್ಲ ಹಾಗೂ ಆರೋಪಿಗಳೆಲ್ಲರೂ ಚಾಸಾ 1 ಮತ್ತು 2 ರವರಿಗೆ ಮೈಕೈಯಿಂದ ಹೊಡೆದು ಹಲ್ಲೆ ಮಾಡಿದರು ಎಂದರೆ ಸರಿಯಲ್ಲ. 1 ನೇ ಆರೋಪಿಯು ಚಾಸಾ 1 ರವರಿ ಸೀರೆ ಹಿಡಿದು ಎಳೆದಾಡಿ ಅವರ ಮೈಕೈಗೆ ಹೊಡೆದು ಹಲ್ಲೆ ಮಾಡಿರುತ್ತರೆ ಎಂದರೆ ಸರಿಯಲ್ಲ. 3 ನೇ ಆರೋಪಿಯು ಚಾಸಾ 2 ರವರ ಎಡ ಕಿವಿಗೆ ಹೊ‍ಿಡದು ಹಲ್ಲೆ ಮಾಡಿರುತ್ತರೆ ಎಂದರೆ ಸರಿಯಲ್ಲ. ಆರೋಪಿಗಳೆಲ್ಲರೂ ಚಾಸಾ 1 ಮತ್ತು 2 ರವರಿಗೆ ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಈ ಜಗಳವನ್ನು ನಾನು , ಚಾಸಾ 3 , 5 ರಿಂದ 8 ರವರನ್ನು ಬಿಡಿಸಿರುತ್ತಾರೆ ಎಂದರೆ ಸರಿಯಲ್ಲ. ನಂತರ ಚಾಸಾ 1 ಮತ್ತು 2 ರವರನ್ನು ಚಾಸಾ 9 ರವರು ಹೊನ್ನಾಳಿ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಚಿಕಿತ್ಸೆ ಕೊಡಿರಸಿರುತ್ತೇನೆ ಎಂದರೆ ಸರಿಯಲ್ಲ.

ಈ ಪ್ರಕರಣದ ಸಂಬಂಧ ನಾನು ಪೋಲೀಸರಿಗೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಒಪ್ಪದ ಹೇಳಿಕೆಯನ್ನು ನಿಪಿ 1 ಎಂದು ಗುರುತಿಸಲಾಯಿತು.

ಎಲ್ಲಾ ವಿಚಾರಗಳು ಗೊತ್ತಿದ್ದರೂ ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲುಃ- ಆರೋಪಿಗಳಿಗೆ ಪರ ವಕೀಲರಿಂದಃ-

ಆರೋಪಿಗಳಿಗೆ ಪರ ವಕೀಲರು ಪಾಟೀ ಸವಾಲು ಏನು ಇಲ್ಲ ಎಂದು ತಿಳಿಸಿದ ಮೇರೆಗೆ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.